ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 2190 (294)
ಸದಸ್ಯರ ಹೆಸರು : ಶ್ರೀ ಹೆಚ್.ಎಂ. ರೇವಣ್ಣ(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು
ಉತ್ತರಿಸುವ ದಿನಾಂಕ : 31.03.2020.

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕು ಅತ್ಯಂತ ಹಿಂದುಳಿದ ಪ್ರದೇಶವಾಗಿದ್ದು ನಿರುದ್ಯೋಗ ಸಮಸ್ಯೆ ನಿರ್ವಹಣೆಗಾಗಿ ಕೈಗಾರಿಕೆಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;	ಸರ್ಕಾರವು ನೇರವಾಗಿ ಕೈಗಾರಿಕೆಗಳನ್ನು ಸ್ಥಾಪಿಸುವುದಿಲ್ಲ. ಆದರೆ, ಕೈಗಾರಿಕೆಗಳನ್ನು ಸ್ಥಾಪಿಸಲು ಮುಂದೆ ಬರುವ ಉದ್ಯಮದಾರರಿಗೆ ಅನ್ವಯಿಸುವ ಕೈಗಾರಿಕಾ ನೀತಿಯನ್ವಯ ಅರ್ಹವಿರುವ ಉತ್ತೇಜನ ಮತ್ತು ರಿಯಾಯಿತಿಗಳನ್ನು ನೀಡಿ ಸಂಪೂರ್ಣವಾಗಿ ಪ್ರೋತ್ಸಾಹಿಸಲಾಗುವುದು.
ಆ	ಮಾಗಡಿ ತಾಲ್ಲೂಕು ಬೆಂಗಳೂರು ಕೇಂದ್ರ ಸ್ಥಾನದಿಂದ ಕೇವಲ 40 ಕಿ.ಮೀ. ಅಂತರ ಇದ್ದರೂ ಸಹ ಯಾವುದೇ ಕೈಗಾರಿಕೆಯನ್ನು ಸ್ಥಾಪನೆ ಮಾಡದಿರುವುದಕ್ಕೆ ಕಾರಣಗಳೇನು;	ಮಾಗಡಿ ತಾಲ್ಲೂಕಿನಲ್ಲಿ ಈಗಾಗಲೇ ಮೆ: ಆರ್‌ಡೆಕ್ಸ್ ಎಂಡೂರ ಹಾಗೂ ಮೆ: ಎಂ.ಕೆ. ಆಗ್ರೋಟೆಕ್ ಬೃಹತ್ ಕೈಗಾರಿಕೆಗಳು ಹಾಗೂ ಅನೇಕ ಸಣ್ಣ ಪ್ರಮಾಣದ ಕೈಗಾರಿಕೆಗಳು ಸ್ಥಾಪನೆಯಾಗಿರುತ್ತವೆ. ಹೆಚ್ಚಿನ ಕೈಗಾರಿಕೆಗಳನ್ನು ಸ್ಥಾಪಿಸಲು ಬಂಡವಾಳ ಹೂಡಿಕೆದಾರರು ಪ್ರಸ್ತಾವನೆ ಸಲ್ಲಿಸದಿರುವುದರಿಂದ ತಾಲ್ಲೂಕಿನಲ್ಲಿ ಕೈಗಾರಿಕಾ ಸ್ಥಾಪನೆಗೆ ಹಿನ್ನಡೆಯಾಗಿದೆ.
ಇ	ಮಾಗಡಿ ತಾಲ್ಲೂಕು ಕೇಂದ್ರ ಪ್ರದೇಶಗಳಲ್ಲಿ ಕೈಗಾರಿಕೆಯನ್ನು ಸ್ಥಾಪಿಸಲು ಕೆ.ಐ.ಎ.ಡಿ.ಬಿ ವತಿಯಿಂದ ಜಮೀನನ್ನು ಸ್ವಾಧೀನಪಡಿಸಿಕೊಂಡು ಕೈಗಾರಿಕೆ ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?	ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕು, ಕಸಬಾ ಹೋಬಳಿ, ಕಾಳಾರಿ, ತಾಳೆಕೆರೆ ಮತ್ತು ತಿಪ್ಪಸಂದ್ರ ಹೋಬಳಿ, ಶಿವನಸಂದ್ರ, ದಂಡೇನಹಳ್ಳಿ ಮತ್ತು ಕುದೂರು ಹೋಬಳಿ, ನಾರಸಂದ್ರ ಗ್ರಾಮಗಳಲ್ಲಿನ ಒಟ್ಟು 800-00 ಎಕರೆ ಜಮೀನನ್ನು ರಾಷ್ಟ್ರೀಯ ಹೆದ್ದಾರಿ ಕಡೆಯಿಂದ ಮೊದಲನೇ ಹಂತದಲ್ಲಿ ಕೈಗಾರಿಕಾ ಪ್ರದೇಶಕ್ಕಾಗಿ ಸ್ವಾಧೀನಪಡಿಸಿಕೊಳ್ಳಲು ದಿನಾಂಕ 18.06.2021 ರಂದು ಜರುಗಿದ ಕೆ.ಐ.ಎ.ಡಿ ಮಂಡಳಿ ಸಭೆಯಲ್ಲಿ ನಿರ್ಣಯಿಸಲಾಗಿದ್ದು, ಸದರಿ ನಿರ್ಣಯದಂತೆ ಪ್ರಸ್ತಾವಿತ ಜಮೀನನ್ನು ಸ್ವಾಧೀನಪಡಿಸುವ ಬಗ್ಗೆ ಕೆಐಎಡಿ ಕಾಯ್ದೆ ಕಲಂ 3(1), 1(3) ಮತ್ತು 28(1) ರಡಿ ಪ್ರಾಥಮಿಕ ಅಧಿಸೂಚನೆ ಪ್ರಸ್ತಾವನೆ ಸಲ್ಲಿಸುವಂತೆ ಮಂಡಳಿಯ ವಿಶೇಷ ಭೂಸ್ವಾಧೀನಾಧಿಕಾರಿಯವರಿಗೆ ದಿನಾಂಕ 05.07.2021 ರಂದು ಸೂಚಿಸಲಾಗಿದೆ.

ಸಿಐ 110 ಎಸ್‌ಪಿಐ 2020

(ಮುರುಗೇಶ ಆರ್. ನಿರಾಣಿ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು